All India Radio: Bangalore
National Bulletin In Kannada
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

27.02.2025 19.35 P.M.

**************

ಮುಖ್ಯಾಂಶಗಳು

- ಮಹಾಕುಂಭ ಮೇಳ ಏಕತೆಯ ಮಹಾಯಜ್ಞ; ಪ್ರಧಾನಿ ಪ್ರತಿಪಾದನೆ
- ದೇಶದ ಆರ್ಥಿಕ ಪ್ರಗತಿಯಲ್ಲಿ ರೈತರ ಪಾತ್ರ ನಿರ್ಣಾಯಕ - ಕೇಂದ್ರ ಸಚಿವೆ ಶೋಬಾ ಕರದ್ಲಾಂಜೆ
- ಮನರಂಜನೆ, ಡಿಜಿಟಲ್ ಗೇಮಿಂಗ್‌ನಲ್ಲಿ ಭಾರತದ ಪಾಲು ಹೆಚ್ಚಳಕ್ಕೆ ಸರ್ಕಾರದ ಕ್ರಮ
- ಐಸಿಸಿ ಚಾಂಪಿಯನ್ ಟ್ರೋಫಿ; ಟೂರ್ನಿಯಿಂದ ಹೊರಬಿದ್ದ ಪಾಕಿಸ್ಥಾನ-ಬಾಂಗ್ಲಾ ದೇಶ
- ಮಹಿಳಾ ಪ್ರೀಮಿಯರ್ ಕ್ರಿಕೆಟ್ ಲೀಗ್ - ರಾಯಲ್ ಚಾಲೆಂಜರ್ಸ್ ಬೆಂಗಳೂರು ಗುಜರಾತ್ ಜೈಂಟ್ಸ್ ನಡುವಿನ ಪಂದ್ಯ ಪ್ರಗತಿಯಲ್ಲಿ

***************

ಉತ್ತರ ಪ್ರದೇಶದ ಪ್ರಯಾಗ್ ರಾಜ್ ನಲ್ಲಿ ನಡೆದ ಮಹಾಕುಂಭಮೇಳ ಏಕತೆಯ ಮಹಾಯಜ್ಞ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ

ಭಾರತ, ಪರಂಪರೆಯ ಬಗ್ಗೆ ಹೆಮ್ಮೆಪಡುತ್ತದೆ ಮತ್ತು ಹೊಸ ಶಕ್ತಿಯೊಂದಿಗೆ ಮುನ್ನಡೆಯುತ್ತಿದೆ. ಇದು ಆಧುನಿಕ ನಿರ್ವಹಣಾ ವೃತ್ತಿಪರರು, ಯೋಜನೆ ಮತ್ತು ನೀತಿ ತಜ್ಞರಿಗೆ ಅಧ್ಯಯನದ ವಿಷಯವಾಗಿದೆ. ೧೪೪ ವರ್ಷಗಳ ನಂತರ, ಸಂತರು ಮತ್ತೊಮ್ಮೆ ಅಭಿವೃದ್ಧಿ ಹೊಂದಿದ ಭಾರತಕ್ಕೆ ಹೊಸ ಸಂದೇಶ ನೀಡಿದ್ದಾರೆ. ಎಂದು ಸಾಮಾಜಿಕ ಜಾಲತಾಣದಲ್ಲಿ ವಿಚಾರ ಹಂಚಿಕೊಂಡಿದ್ದಾರೆ.

ಪ್ರಯಾಗ್‌ರಾಜ್‌ನಲ್ಲಿ ಕೋಟ್ಯಾಂತರ ಜನರು ಹೇಗೆ ಸೇರುತ್ತಾರೆ ಎಂಬುದನ್ನು ಜಗತ್ತು ಆಶ್ಚರ್ಯದಿಂದ ನೋಡಿದೆ ಈ ಜನರಿಗೆ ಯಾವುದೇ ಔಪಚಾರಿಕ ಆಹ್ವಾನ ಮತ್ತು ಯಾವಾಗ ಹೋಗಬೇಕೆಂಬುದರ ಬಗ್ಗೆ ಪೂರ್ವ ಸಂವಹನ ಇರಲಿಲ್ಲ. ಆದರೂ ಕೋಟ್ಯಂತರ ಜನರು ತಮ್ಮ ಇಚ್ಛೆಯಿಂದ ಮಹಾಕುಂಭಕ್ಕೆ ಹೊರಟು ಪವಿತ್ರ ನದಿಯಲ್ಲಿ ಸ್ನಾನ ಮಾಡಿ ಸಂಭ್ರಮಿಸಿದರು. ಮಹಿಳೆಯರು ಹಿರಿಯರು, ದಿವ್ಯಾಂಗ ಸಹೋದರ ಸಹೋದರಿಯರು - ಎಲ್ಲರೂ ಸಂಗಮ ತಲುಪಲು ಒಂದು ಮಾರ್ಗ ಕಂಡುಕೊಂಡರು ಎಂದು ಪ್ರಧಾನಿ ಹೇಳಿದರು.

***************

ದೇಶದ ಪ್ರಗತಿಯಲ್ಲಿ ರೈತರ ಪಾತ್ರ ನಿರ್ಣಾಯಕ ಎಂದು ಕೇಂದ್ರ ರೈತ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಹೇಳಿದ್ದಾರೆ

ಬೆಂಗಳೂರಿನಲ್ಲಿ ಆರಂಭವಾದ ರಾಷ್ಟ್ರೀಯ ತೋಟಗಾರಿಕಾ ಮೇಳ ಉದ್ಘಾಟಿಸಿ ಅವರು ಮಾತನಾಡಿದರು. ಗುಣಮಟ್ಟದ ಹಣ್ಣು ತರಕಾರಿಗಳನ್ನು ಬೆಳೆಯುವ ಬಗ್ಗೆ ಮತ್ತು ಅದನ್ನು ವಿದೇಶಗಳಿಗೆ ರಫ್ತು ಮಾಡುವ ರೈತರಿಗೆ ಹೆಚ್ಚಿನ ಜಾಗೃತಿ, ಅರಿವು ಮೂಡಿಸಬೇಕಾದ ಅಗತ್ಯವಿದೆ ಎಂದು ಸಚಿವರು ಒತ್ತಿ ಹೇಳಿದರು

ದೇಶದಿಂದ ಬಾಸುಮತಿ ಅಕ್ಕಿ, ಮೀನು, ಮಾಂಸ ಮಾವಿನ ಹಣ್ಣು ಕಿತ್ತಳೆ ಹಣ್ಣುಗಳು ಕೆಲವು ತರಕಾರಿಗಳು ಬಹಳ ದೊಡ್ಡ ಪ್ರಮಾಣದಲ್ಲಿ ವಿದೇಶಕ್ಕೆ ರಫ್ತಾಗುತ್ತದೆ ಆದರೆ ಗುಣಮಟ್ಟ ಕಾಪಾಡಿಕೊಳ್ಳದಿದ್ದರೆ, ಅವುಗಳು ತಿರಸ್ಕೃತವಾಗುವ ಸಾಧ್ಯತೆಯಿದೆ. ಆದ್ದರಿಂದ ರೈತರು ಅಧಿಕ ಇಳುವರಿ ಪಡೆಯುವ ಜೊತೆಗೆ ಗುಣಮಟ್ಟ ಕಾಪಾಡಿಕೊಳ್ಳುವುದು ಅದರಲ್ಲೂ ವಿಶೇಷವಾಗಿ ಕೀಟನಾಶಕ ಇಲ್ಲದ ಹಣ್ಣು ತರಕಾರಿ ಬೆಳೆಯುವ ಬಗ್ಗೆ ಹೆಚ್ಚಿನ ಗಮನ ಹರಿಸಬೇಕು ಎಂದು ಹೇಳಿದರು.

ಸಣ್ಣ ಮತ್ತು ಅತಿ ಸಣ್ಣ ರೈತರ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರ ಹಲವು ಪೂರಕ ಕಾರ್ಯಕ್ರಮಗಳನ್ನು ಕೈಗೊಂಡಿದೆ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯನ್ನು ಜಾರಿಗೊಳಿಸಿ, ಬೆಳೆ ವಿಮೆಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ ರೈತರನ್ನು ಆರ್ಥಿಕ ಸಂಕಷ್ಟಗಳಿಂದ ಪಾರು ಮಾಡುವುದೇ ಸರ್ಕಾರದ ಗುರಿಯಾಗಿದೆ ಎಂದು ಸಚಿವೆ ಶೋಭಾ ಕರಂದ್ಲಾಜೆ ಹೇಳಿದರು.

***************

ಭಾರತದ ಅತಿ ದೊಡ್ಡ ಮತ್ತು ಅತ್ಯಂತ ಪ್ರಭಾವಶಾಲಿ ಬೆಂಗಳೂರು ಜಿಎಫೆಕ್ಸ್ ಸಮ್ಮೇಳನ ಇಂದಿನಿಂದ ಮಾರ್ಚ್ ೧ರವರೆಗೆ ನಡೆಯಲಿದೆ. ಕರ್ನಾಟಕದ ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಸಮ್ಮೇಳನಕ್ಕೆ ಚಾಲನೆ ನೀಡಿ, ಸೃಜನ ಶೀಲತೆ, ತಂತ್ರಜ್ಞಾನ ಮತ್ತು ನಾವೀನ್ಯತೆಯಲ್ಲಿ ಕರ್ನಾಟಕ ಮುಂಚೂಣಿಯಲ್ಲಿದೆ.

ಈ ಬಾರಿಯ ಗೆಫೆಕ್ಸ್ ಶೃಂಗಸಭೆಯಲ್ಲಿ ಕರ್ನಾಟಕ ಭಾರತದ ಡಿಜಿಟಲ್ ಸೃಜನಶೀಲ, ಕ್ರಾಂತಿಯ ಕೇಂದ್ರ ಬಿಂದುವಾಗಿದೆ ಎಂದು ಅಭಿಪ್ರಾಯಪಟ್ಟರು.

ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಕಾರ್ಯದರ್ಶಿ ಸಂಜಯ್ ಜಾಜು, ಮಾತನಾಡಿ, ಮೇ ೧ ರಿಂದ ೪ರವರೆಗೆ ಮುಂಬೈನಲ್ಲಿ ವೇವ್ಸ್ ಶೃಂಗಸಭೆ ಏರ್ಪಡಿಸಲಾಗುತ್ತಿದ್ದು, ಮಾಧ್ಯಮ ಮತ್ತು ಮನರಂಜನಾ ಕ್ಷೇತ್ರಕ್ಕೆ ಸಂಬಂಧಪಟ್ಟ ತಜ್ಞರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ವಿಶ್ವದ ಮನರಂಜನಾ ಮತ್ತು ಡಿಜಿಟಲ್ ಗೇಮಿಂಗ್ ಕ್ಷೇತ್ರದಲ್ಲಿ ಭಾರತದ ಪಾಲು ಕೇವಲ ಶೇಕಡ ೨ರಷ್ಟಿದ್ದು, ಇದನ್ನು ಹೆಚ್ಚಿಸಲು ಮುಂಬೈನಲ್ಲಿ ನಡೆಯುವ ಶೃಂಗಸಭೆ ಸಹಕಾರಿಯಾಗಲಿದೆ ಎಂದು ಸಂಜಯ್ ಜಾಜು ಅಭಿಪ್ರಾಯಪಟ್ಟರು.

***************

ದೇಶದ ಎಲ್ಲಾ ವಿಮಾನ ನಿಲ್ದಾಣಗಳಿಗೆ ಉಡಾನ್ ಯಾತ್ರಿ ಕೆಫೆ ಸೌಲಭ್ಯ ಕಲ್ಪಿಸಲಾಗುವುದು ಎಂದು ಕೇಂದ್ರ ನಾಗರಿಕ ವಿಮಾನಯಾನ ಸಚಿವ ಕಿಂಜ್ರಪ್ಪು ರಾಮ್ ಮೋಹನ್ ನಾಯ್ಡು ಹೇಳಿದ್ದಾರೆ.

ಚೆನ್ನೈ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಉಡಾನ್ ಯಾತ್ರಿ ಕೆಫೆ ಉದ್ಘಾಟಿಸಿ ಮಾತನಾಡಿದ ಅವರು, ಕುಡಿಯುವ ನೀರು, ಚಹಾ, ಕಾಫಿ, ತಿಂಡಿಗಳು ಮತ್ತು ಸ್ಥಳೀಯ ಸಿಹಿತಿಂಡಿಗಳನ್ನು ಅತ್ಯಂತ ಕಡಿಮೆ ಬೆಲೆಗೆ ಮಾರಾಟ ಮಾಡುವುದರಿಂದ ದೇಶೀಯ ಪ್ರಯಾಣಿಕರಿಗೆ ಹೆಚ್ಚು ಅನುಕೂಲವಾಗಲಿದೆ. ಕಳೆದ ಡಿಸೆಂಬರ್‌ನಲ್ಲಿ ಕೋಲ್ಕತ್ತಾ ವಿಮಾನ ನಿಲ್ದಾಣದಲ್ಲಿ ಉದ್ಘಾಟನೆಗೊಂಡ ಮೊದಲ ಇಂತಹ ಕೆಫೆ ದಿನಕ್ಕೆ ೩೦ ಸಾವಿರ ರೂಪಾಯಿ ವಹಿವಾಟು ನಡೆಸುತ್ತಿದೆ ಎಂದರು.

ಚೆನ್ನೈ ವಿಮಾನ ನಿಲ್ದಾಣದಲ್ಲಿ ಮತ್ತೊಂದು ಟರ್ಮಿನಲ್ ಅನ್ನು ಮಾರ್ಚ್ ೧೬ ರಂದು ಉದ್ಘಾಟಿಸಲಾಗುವುದು. ದೇಶದ ಯಾವುದೇ ಭಾಗಕ್ಕೆ ಸಂಚರಿಸುವ ಪ್ರಯಾಣಿಕರಿಗೆ ಉಡಾನ್ ಯೋಜನೆಯ ಸೌಲಭ್ಯ ಕಲ್ಪಿಸಲು ಸರ್ಕಾರ ಗಂಭೀರ ಪ್ರಯತ್ನ ಮಾಡುತ್ತಿದೆ ಎಂದು ಸಚಿವರು ಹೇಳಿದರು.

***************

ರೇಡಿಯೊ ವ್ಯಾಪ್ತಿಯನ್ನು ವಿಸ್ತರಿಸುವಲ್ಲಿ ಯುವಕರ ಪಾತ್ರ ಮುಖ್ಯವಾಗಿದೆ ಎಂದು ಪ್ರಸಾರ ಭಾರತಿ ಅಧ್ಯಕ್ಷ ನವನೀತ್ ಕುಮಾರ್ ಸೆಹಗಲ್ ಅಭಿಪ್ರಾಯಪಟ್ಟಿದ್ದಾರೆ.

ಗುಜರಾತ್‌ಗೆ ಒಂದು ದಿನದ ಭೇಟಿ ನೀಡಿದ್ದ ಅವರು, ಇಂದು ಗುಜರಾತ್ ಆಕಾಶವಾಣಿ ಕೇಂದ್ರಕ್ಕೂ ಭೇಟಿ ನೀಡಿ, ಸ್ಟುಡಿಯೋಗಳು, ಸುದ್ದಿ ಮತ್ತು ಕಾರ್ಯಕ್ರಮ ವಿಭಾಗಗಳ ಕಾರ್ಯವೈಖರಿ ಪರಿಶೀಲಿಸಿದರು.

ಎಫ್‌ಎಂ ನೆಟ್‌ವರ್ಕ್ ವಿಸ್ತರಿಸುವ ಮೂಲಕ ಪ್ರಸಾರ ಭಾರತಿ ತನ್ನ ವೈಭವ ಮರುಸ್ಥಾಪಿಸಲು ನಡೆಸುತ್ತಿರುವ ಪ್ರಯತ್ನಗಳನ್ನು ವಿವರಿಸಿದರು.

ಯುವಕರು ಮತ್ತು ಮಹಿಳಾ ಕಾರ್ಯಕ್ರಮಗಳು ಹೆಚ್ಚು ಜನರನ್ನು ತಲುಪುವಂತೆ ಹೊಸ ಆಲೋಚನೆಯ ಕಾರ್ಯಕ್ರಮಗಳನ್ನು ಬಿತ್ತರಿಸಬೇಕೆಂದು ಅಧಿಕಾರಿಗಳಿಗೆ ಕಿವಿ ಮಾತು ಹೇಳಿದರು.

***************

ಬೆಂಗಳೂರಿನ ಕಾಫಿ ಮಂಡಳಿಯಲ್ಲಿ ಇಂದು ಅಂತರ್ ಮಾಧ್ಯಮ ಪ್ರಚಾರ ಸಮನ್ವಯ ಸಮಿತಿ ಸಭೆ ಪ್ರೆಸ್ ಇನ್‌ಫರ್ಮೇಷನ್ ಬ್ಯೂರೊ-ಪಿಐಬಿ ಅಧ್ಯಕ್ಷತೆಯಲ್ಲಿ ನಡೆಯಿತು.

ಸಭೆಯಲ್ಲಿ ಮಾತನಾಡಿದ ಕಾಫಿ ಮಂಡಳಿಯ ಕಾರ್ಯದರ್ಶಿ ಡಾ. ಕೆ. ಜಿ. ಜಗದೀಶ್, ಭಾರತ ಕಾಫಿ ಉತ್ಪಾದನೆಯಲ್ಲಿ ಏಳನೇ ಅತಿ ದೊಡ್ಡ ಮತ್ತು ಜಾಗತಿಕವಾಗಿ ಐದನೇ ಅತಿ ದೊಡ್ಡ ರಫ್ತು ದೇಶವಾಗಿದೆ ಎಂದು ಹೇಳಿದರು.

ಸಭೆಯಲ್ಲಿ, ಆಕಾಶವಾಣಿ, ದೂರದರ್ಶನ, ನಿಮ್ಹಾನ್ಸ್ ಸೇರಿದಂತೆ ೨೫ಕ್ಕೂ ಹೆಚ್ಚು ಕೇಂದ್ರ ಸರ್ಕಾರದ ಸಂಸ್ಥೆಗಳು ಭಾಗಿಯಾಗಿದ್ದವು.

***************

ಐಸಿಸಿ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್ ಟೂರ್ನಿಯಲ್ಲಿ ಇಂದು ನಡೆಯಬೇಕಾಗಿದ್ದ ಪಾಕಿಸ್ತಾನ ಮತ್ತು ಬಾಂಗ್ಲಾದೇಶ ಪಂದ್ಯ ಮಳೆಯಿಂದ ರದ್ದಾಗಿದೆ. ಇದರಿಂದಾಗಿ ಟೂರ್ನಿಯಸೆಮಿಫೈನಲ್ ಹಾದಿಯಿಂದ ಅತಿಥೆಯ ಪಾಕಿಸ್ತಾನ ಮತ್ತು ಬಾಂಗ್ಲಾದೇಶ ತಂಡಗಳು ಹೊರಬಿದ್ದಿದೆ.

***************

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಮಹಿಳಾ ಪ್ರೀಮಿಯರ್ ಕ್ರಿಕೆಟ್ ಲೀಗ್ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಗುಜರಾತ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಿದ್ದು, ಪಂದ್ಯ ಪ್ರಗತಿಯಲ್ಲಿದೆ.

ಟಾಸ್ ಗೆದ್ದ ಗುಜರಾತ್ ಜೈಂಟ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿದೆ.

***************

ಜಮ್ಮು ಮತ್ತು ಕಾಶ್ಮೀರ ಮತ್ತು ಹಿಮಾಚಲ ಪ್ರದೇಶದಲ್ಲಿ ಮುಂದಿನ ಎರಡು ದಿನ ಮಳೆ ಮತ್ತು ಹಿಮಪಾತದ ಕುರಿತು ಭಾರತ ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ನೀಡಿದೆ.

ಈ ಪ್ರದೇಶಗಳಲ್ಲಿ ಸಾಧಾರಣದಿಂದ ಭಾರೀ ಮಳೆಯಾಗುವ ಮುನ್ಸೂಚನೆ ನೀಡಿದೆ. ಉತ್ತರ ಪಂಜಾಬ್ ಮತ್ತು ಉತ್ತರಾಖಂಡದಲ್ಲಿಯೂ ಯಲ್ಲೋ ಅಲರ್ಟ್ ನೀಡಲಾಗಿದೆ.

ಈ ಕುರಿತು ಆಕಾಶವಾಣಿಯೊಂದಿಗೆ ಮಾತನಾಡಿದ ವಿಜ್ಞಾನಿ ಡಾ. ಸೋಮಾ ಸೇನ್, ದೇಶದ ಉತ್ತರ ಭಾಗದಲ್ಲಿ ಎರಡು ದಿನ ಗುಡುಗು ಸಹಿತ ಆಲಿಕಲ್ಲು ಮಳೆ ಆಗಲಿದ್ದು, ಜನಜೀವನದ ಮೇಲೆ ಸಹ ಪರಿಣಾಮ ಬೀರುವ ಸಾಧ್ಯತೆಯಿದೆ. ಇದರ ಜೊತೆಗೆ ಮುಂದಿನ ಮೂರು ದಿನಗಳವರೆಗೆ

ರಾಷ್ಟ್ರ ರಾಜಧಾನಿ ದೆಹಲಿಯಲ್ಲೂ ಸಹ ಗುಡುಗು ಸಹಿತ ತುಂತುರು ಮಳೆಯಾಗಲಿದೆ ಎಂದು ಹೇಳಿದ್ದಾರೆ.

***************

ಯುರೋಪಿಯನ್ ಕಮಿಷನ್ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಇಂದು ದೆಹಲಿಗೆ ಆಗಮಿಸಿದರು. ದೆಹಲಿ ವಿಮಾನ ನಿಲ್ದಾಣದಲ್ಲಿ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್ ಬರಮಾಡಿಕೊಂಡರು.

ಅಧ್ಯಕ್ಷರು ಇಂದು ಸಂಜೆ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರನ್ನು ಭೇಟಿ ಮಾಡಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ನಾಳೆ ಯುರೋಪಿಯನ್ ಆಯೋಗದ ಅಧ್ಯಕ್ಷರೊಂದಿಗೆ ನಿಯೋಗ ಮಟ್ಟದ ಮಾತುಕತೆ ನಡೆಸಲಿದ್ದಾರೆ. ೨೭ ಇU ಆಯುಕ್ತರಲ್ಲಿ ೨೨ ಪ್ರತಿನಿಧಿಗಳು ಭಾರತ ಪ್ರವಾಸ ಕೈಗೊಂಡಿದ್ದಾರೆ ಎಂದು ಪ್ರತಿನಿಧಿ ವರದಿ ಮಾಡಿದ್ದಾರೆ.

ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಬಲಪಡಿಸಲು ಈ ಮಾತುಕತೆ ದಾರಿ ಮಾಡಿಕೊಡಲಿದೆ. ಭಾರತ ಮತ್ತು ಯುರೋಪ್ ೨೦೦೪ ರಿಂದ ಕಾರ್ಯತಂತ್ರದ ಪಾಲುದಾರ ರಾಷ್ಟ್ರಗಳಾಗಿವೆ.

*******ಮುಕ್ತಾಯ*******